**ಕರ್ನಾಟಕ ಸರ್ಕಾರ**

ಸಂಖ್ಯೆ: ಪಪೂಶಿ/ಶೈ.ಶಾ./ವಿ.ಯೋ/2015-16

ನಿರ್ದೇಶಕರ ಕಛೇರಿ,
ಪದವಿ ಪೂರ್ವ ಶಿಕ್ಷಣ ಇಲಾಖೆ,
18ನೇ ಅಡ್ಡರಸ್ತೆ, ಮಲ್ಲೇಶ್ವರಂ,
ಬೆಂಗಳೂರು-560012.
ದಿನಾಂಕ: 17-06-2015.

**ಸುತ್ತೋಲೆ**

ವಿಷಯ : ಪದವಿ ಪೂರ್ವ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾಥಿ/ನಿಯರಿಗೆ ಸಾಮೂಹಿಕ ವಿಮೆ ಯೋಜನೆ ಜಾರಿಗೆ ತರುವ ಬಗ್ಗೆ.

****

ಇತ್ತೀಚಿಗೆ ಒಂದು ಖಾಸಗಿ ಅನುದಾನ ರಹಿತ ಪದವಿ ಪೂರ್ವ ಕಾಲೇಜಿನಲ್ಲಿ ಒರ್ವ ವಿದ್ಯಾರ್ಥಿನಿಯನ್ನು ದುಷ್ಕರ್ಮಿಯೊಬ್ಬ ಗುಂಟೇಟಿನಿಂದ ಸಾಯಿಸಿ ಇತರ ವಿದ್ಯಾರ್ಥಿನಿಯರಿಗೂ ಇದರಿಂದ ಗಾಯಗಳಾಗಿ ಕಾಲೇಜಿನ ಒಟ್ಟು ವಾತಾವರಣ ಹಪಗೆಟ್ಟಿರುತ್ತದೆ. ಈ ರೀತಿ ಸುರಕ್ಷಿತ ಹಾಗೂ ಪ್ರಶಾಂತ ವಾತಾವರಣ ಇಲ್ಲದೇ ಇರುವುದು ಗಂಭೀರ ವಿಷಯ. ಈ ಹಿನ್ನಲೆಯಲ್ಲಿ ಕೂಡಲೇ ಖಾಸಗಿ ಅನುದಾನ ಸಹಿತ ಹಾಗೂ ಅನುದಾನರಹಿತ ಪದವಿ ಪೂರ್ವ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿಯನ್ನು ಪರಿಗಣಿಸಿ ಎಲ್ಲರಿಗೂ ಅನ್ವಯಿಸುವಂತೆ ಸಾಮೂಹಿಕ ವಿಮಾ ಯೋಜನೆಯನ್ನು ಜಾರಿಗೆ ತರುವುದು ಹಾಗೂ ಈ ನಿಟ್ಟಿನಲ್ಲಿ ಅಗತ್ಯ ಕ್ರಮ ಕೈಗೊಳ್ಳಲು ಈ ಮೂಲಕ ಸೂಚಿಸಿದೆ. ವಿದ್ಯಾರ್ಥಿಗಳಿಗೆ ಸುರಕ್ಷತೆ ನೀಡುವುದು ಪ್ರತಿಯೊಂದು ಆಡಳಿತ ಮಂಡಳಿಯ ಜವಾಬ್ದಾರಿಯಾಗಿರುತ್ತದೆ. ಆದ್ದರಿಂದ ನಿಮ್ಮ ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿರುವ ಎಲ್ಲ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ಸಾಮೂಹಿಕ ವಿಮೆ ಮಾಡಿಸಿ, ಕೈಗೊಂಡ ಕ್ರಮದ ಬಗ್ಗೆ ಅನುಪಾಲನ ವರದಿಯನ್ನು ಸಲ್ಲಿಸಲು ಸೂಚಿಸಿದೆ.

Sd/-
ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ

ಪ್ರತಿಗಳು:
ರಾಜ್ಯದ ಎಲ್ಲಾ ಖಾಸಗಿ ಅನುದಾನಿತ ಹಾಗೂ ಅನುದಾನಿತ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರಿಗೆ

ಪ್ರತಿಗಳು ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ,

1. ಪದವಿ ಪೂರ್ವ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ಉಪನಿರ್ದೇಶಕರಿಗೆ
2. ಕಡತಕ್ಕೆ